ಕ್ರಮ ಸಂಖ್ಯೆ: 1381
ವಿಭಾಗ:
ದಿನಾಂಕ: 26/9/17

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಪರಿಪೂರ್ಣ ಸನಾತನ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ಅರ್ಜುನಬೆಟ್ಟಹಳ್ಳಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ ಬಿ.ಎ.ಎಂ.ಎಸ್. ಪದವಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

ಓದಲಾಗಿದೆ:
1. ಆಯುಷ್ ನಿರ್ದೇಶಕರ ಪ್ರಸ್ತಾವನೆ ಸಂಖ್ಯೆ:ಆಯುಷ್/07/ಅಭಿವೃದ್ಧಿ(3)/2016-17, ದಿನಾಂಕ: 22.08.2017.
2. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರ ಪತ್ರ ಸಂಖ್ಯೆ:ACA/AFF/AY-75/2017-18, ದಿನಾಂಕ:21/03/2016.
3. ಸರ್ಕಾರದ ಪತ್ರ ಸಂಖ್ಯೆ:ಆಕುಕ 91 ಪಿಟಿಡಿ 2016, ದಿನಾಂಕ:20.04.2017.
4. ಆಯುಷ್ ಮಂತ್ರಾಲಯದ ಪತ್ರ ಸಂಖ್ಯೆ:R.12011/04/2016-EP (IM-1), dated: 16/08/2017.

***

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ (1)ರ ಪ್ರಸ್ತಾವನೆಯಲ್ಲಿ, ನಿರ್ದೇಶಕರು, ಆಯುಷ್ ಇಲಾಖೆ, ಬೆಂಗಳೂರು ಇವರು ಶ್ರೀ ಪರಿಪೂರ್ಣ ಸನಾತನ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ಅರ್ಜುನಬೆಟ್ಟಹಳ್ಳಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ 2017-18ನೇ ಶೈಕ್ಷಣಿಕ ಸಾಲಿನಿಂದ 60 ವಿದ್ಯಾರ್ಥಿಗಳ ಪ್ರವೇಶ ಮಿತಿಯಲ್ಲಿ ಬಿ.ಎ.ಎಂ.ಎಸ್. ಪದವಿ ಕೋರ್ಸ್ ಪ್ರಾರಂಭಿಸಲು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವು ಅಫಿಲಿಯೇಷನ್ ನೀಡಿದ್ದರ ಮೇರೆಗೆ ರಾಜ್ಯ ಸರ್ಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಕೇಂದ್ರ ಸರ್ಕಾರಕ್ಕೆ ಒದಗಿಸಲಾಗಿದ್ದು, ಪ್ರಸ್ತುತ ಕೇಂದ್ರ ಸರ್ಕಾರವು ಸದರಿ ಕೋರ್ಸ್ ಪ್ರಾರಂಭಿಸಲು ಕೆಲವು ಷರತ್ತಿಗೊಳಪಟ್ಟು ಅನುಮತಿ ನೀಡಿರುತ್ತದೆ. ಅದರಂತೆ 2017-18ನೇ ಶೈಕ್ಷಣಿಕ ಸಾಲಿನಿಂದ ಅನ್ವಯಿಸುವಂತೆ ಸರ್ಕಾರದ ಆದೇಶ ಹೊರಡಿಸಲು ಕೋರಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ (2)ರ ಪತ್ರದಲ್ಲಿ ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರು ಶ್ರೀ ಪರಿಪೂರ್ಣ ಸನಾತನ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಅರ್ಜುನಬೆಟ್ಟಹಳ್ಳಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ 2017-18ನೇ ಶೈಕ್ಷಣಿಕ ಸಾಲಿಗೆ 60 ವಿದ್ಯಾರ್ಥಿಗಳ ಪ್ರವೇಶ ಮಿತಿಯಲ್ಲಿ ಬಿ.ಎ.ಎಂ.ಎಸ್. ಪದವಿ ಕೋರ್ಸ್ ಪ್ರಾರಂಭಿಸಲು ಅಫಿಲಿಯೇಷನ್ ನೀಡಿರುವುದಾಗಿ ತಿಳಿಸಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ (3)ರ ಸರ್ಕಾರದ ಪತ್ರದೊಂದಿಗೆ, ಶ್ರೀ ಪರಿಪೂರ್ಣ ಸನಾತನ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ಅರ್ಜುನಬೆಟ್ಟಹಳ್ಳಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ 2017-18ನೇ ಶೈಕ್ಷಣಿಕ ಸಾಲಿನಿಂದ 60 ವಿದ್ಯಾರ್ಥಿಗಳ ಪ್ರವೇಶಮಿತಿಯಲ್ಲಿ ಬಿ.ಎ.ಎಂ.ಎಸ್. ಪದವಿ ಕೋರ್ಸ್ ಪ್ರಾರಂಭಿಸಲು ರಾಜ್ಯ ಸರ್ಕಾರದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ.

ಮೇಲೆ ಓದಲಾದ ಕ್ರ.ಸಂ (4)ರ ಪತ್ರದಲ್ಲಿ ಭಾರತ ಸರ್ಕಾರದ ಆಯುಷ್ ಮಂತ್ರಾಲಯವು ಶ್ರೀ ಪರಿಪೂರ್ಣ ಸನಾತನ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ಅರ್ಜುನಬೆಟ್ಟಹಳ್ಳಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ

. . . 2

ಜಿಲ್ಲೆ ಇಲ್ಲಿ 2017-18ನೇ ಶೈಕ್ಷಣಿಕ ಸಾಲಿಗೆ 60 ವಿದ್ಯಾರ್ಥಿಗಳ ಪ್ರವೇಶ ಮಿತಿಯಲ್ಲಿ ಬಿ.ಎ.ಎಂ.ಎಸ್. ಪದವಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡಿರುತ್ತದೆ.

ಆಯುಷ್ ನಿರ್ದೇಶಕರ ಪ್ರಸ್ತಾವನೆ ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ಶ್ರೀ ಪರಿಪೂರ್ಣ ಸನಾತನ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ಅರ್ಜುನಬೆಟ್ಟಹಳ್ಳಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ 2017-18ನೇ ಶೈಕ್ಷಣಿಕ ಸಾಲಿನಿಂದ 60 ವಿದ್ಯಾರ್ಥಿಗಳ ಪ್ರವೇಶಮಿತಿಯಲ್ಲಿ ಬಿ.ಎ.ಎಂ.ಎಸ್. ಪದವಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡಲು ನಿರ್ಧರಿಸಿದೆ. ಆದುದರಿಂದ, ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 251 ಪಿಟಿಡಿ 2017, ಬೆಂಗಳೂರು, ದಿನಾಂಕ:22.09.2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಪರಿಪೂರ್ಣ ಸನಾತನ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರ, ನಂ. 91, ಕೈವಲ್ಯ ಸನ್ನಿಧಾನ, ಅರ್ಜುನಬೆಟ್ಟಹಳ್ಳಿ, ಗೊಲ್ಲಹಳ್ಳಿ ಅಂಚೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ 2017-18ನೇ ಶೈಕ್ಷಣಿಕ ಸಾಲಿನಿಂದ 60 ವಿದ್ಯಾರ್ಥಿಗಳ ಪ್ರವೇಶಮಿತಿಯಲ್ಲಿ ಬಿಎಎಂಎಸ್ ಪದವಿ ಕೋರ್ಸನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಪ್ರಾರಂಭಿಸಲು ಸರ್ಕಾರದ ಅನುಮತಿ ನೀಡಲಾಗಿದೆ.

1. ಪ್ರಸ್ತಾಪಿಸಿರುವ ಬಿ.ಎ.ಎಂ.ಎಸ್. ಪದವಿ ಕೋರ್ಸ್ ಪ್ರಾರಂಭಿಸಲು ಭಾರತ ಸರ್ಕಾರ/ಸಿ.ಸಿ.ಐ.ಎಂ. ನವದೆಹಲಿ ಇವರಿಂದ ಅನುಮತಿ/ಅನುಮೋದನೆಯನ್ನು ಪಡೆಯತಕ್ಕದ್ದು.
2. ಕಾಲೇಜನ್ನು ಪ್ರಾರಂಭಿಸುವ ಮುನ್ನ ಅಗತ್ಯವಿರುವ ಮೂಲ ಸೌಲಭ್ಯಗಳು ಹಾಗೂ ಸಿಬ್ಬಂದಿಯನ್ನು ಹೊಂದಿರತಕ್ಕದ್ದು.
3. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು.
4. ಭಾರತ ಸರ್ಕಾರ/ಸಿ.ಸಿ.ಐ.ಎಂ. ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
5. ಕೇಂದ್ರ/ರಾಜ್ಯ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.
6. ಈ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.
7. ಸರ್ಕಾರದ ಪೂರ್ವಾನುಮತಿಯಿಲ್ಲದೆ ಸಂಸ್ಥೆಯ ಹೆಸರು ಮತ್ತು ವಿಳಾಸವನ್ನು ಬದಲಾಯಿಸಬಾರದು.
8. ಸರ್ಕಾರ ವಿಧಿಸಿರುವ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದ್ದಲ್ಲಿ ಸಂಯೋಜನೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ಕಮಲಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
(ಭಾರತೀಯ ವೈದ್ಯ ಪದ್ಧತಿ)
(ದೂರವಾಣಿ ಸಂಖ್ಯೆ:22034292)

ಇವರಿಗೆ:

1) Secretary to Government, Ministry of AYUSH, AYUSH Bhawan, B.Block, GPO Complex, New Delhi-110 023. (R.12011/06/2015-EP (IM-1).

ನಿರ್ದೇಶಕರು, ಆಯುಷ್ ಇಲಾಖೆ, ಧನ್ವಂತರಿ ರಸ್ತೆ, ಬೆಂಗಳೂರು-09.

ಸಂಖ್ಯೆ: ಆಯುಷ್/07/ಅಭಿವೃದ್ಧಿ(3)/2016-17

ಆಯುಷ್ ನಿರ್ದೇಶನಾಲಯ,
ಧನ್ವಂತರಿ ರಸ್ತೆ,
ಬೆಂಗಳೂರು, ದಿನಾಂಕ: 09-10-2017

ಸರ್ಕಾರದ ಆದೇಶ ಸಂಖ್ಯೆ: ಆಕುಕ 251 ಪಿಟಿಡಿ 2017, ಬೆಂಗಳೂರು, ದಿನಾಂಕ:22-09-2017ರನ್ನು ಮಾಹಿತಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ ಈ ಕೆಳಕಂಡವರಿಗೆ ಕಳುಹಿಸಲಾಗಿದೆ.

1. ಪ್ರಾಚಾರ್ಯರು, ಶ್ರೀ ಪರಿಪೂರ್ಣ ಸನಾತನ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ, ಆಸ್ಪತ್ರೆ, ಮತ್ತು ಸಂಶೋಧನಾ ಕೇಂದ್ರ, ನಂ. 91, ಅರ್ಜುನಬೆಟ್ಟಹಳ್ಳಿ, ಕಸಬಾ ಹೋಬಳಿ, ಗೊಲ್ಲಹಳ್ಳಿ ಗ್ರಾಮ ಪಂಚಾಯತ್, ನೆಲಮಂಗಲ ತಾಲ್ಲೂಕು, ಬೆಂಗಳೂರು ರೂರಲ್.
2. ರಿಜಿಸ್ಟ್ರಾರ್, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ 'ಟಿ' ಬ್ಲಾಕ್, ಜಯನಗರ, ಬೆಂಗಳೂರು - 41.
3. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಸಂಪಿಗೆ ರಸ್ತೆ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು.
4. ನೋಂದಣಾಧಿಕಾರಿಗಳು, ಕರ್ನಾಟಕ ಆಯುರ್ವೇದ ಮತ್ತು ಯುನಾನಿ ವೈದ್ಯ ಮಂಡಳಿ, ಬ್ರಿಗೇಡ್ ಪ್ಲಾಜಾ, ಮೊದಲನೇ ಮಹಡಿ, ನಂ. 110, 111, 112 ಮತ್ತು 113, ಆನಂದ್‌ರಾವ್ ವೃತ್ತ, ಎಸ್.ಸಿ. ರೋಡ್, ಬೆಂಗಳೂರು - 560 009.
5. ಕಛೇರಿ ಪ್ರತಿ / ಹೆಚ್ಚುವರಿ ಪ್ರತಿ.

ಜಂಟಿ ನಿರ್ದೇಶಕರು (ಆಯುಷ್) (ಶಿ)
(ವೈದ್ಯಕೀಯ ಶಿಕ್ಷಣ)
ಆಯುಷ್ ನಿರ್ದೇಶನಾಲಯ
ಧನ್ವಂತರಿ ರಸ್ತೆ, ಬೆಂಗಳೂರು-09